



ಅರುಣ ಪಿ. ಭಟ್ಟ


## ವಾರಭವಿಷ್ಯ: 15.10.2020ರಿಂದ 21.10.2020ರವರೆಗೆ




ಈ ವಾರದ ಆರಂಭದಲ್ಲೇ ಸಂಬಂಧಿಕರ ಭೇಟಿಗೆ ನಿಶ್ಚಯ ಮಾಡುವ ಸಾಧ್ಯತೆ ಇದೆ. ಉದ್ಯೋಗಸ್ಥರಿಗೆ ತಾತ್ಕಾಲಿಕ ವರ್ಗಾವಣೆ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಕೌಟುಂಬಿಕ ಜೀವನ ಸಂತೋಷವಾಗಿರುತ್ತದೆ.ಸಂಗಾತಿ ಮಕ್ಕಳ ಜತೆಗಿನ ಬಾಂಧವ್ಯ ಉತ್ತಮವಾಗಿರುತ್ತದೆ. ಅವರಿಗೆ ಕೆಲವು ಜವಾಬ್ದಾರಿಗಳನ್ನು ವಹಿಸಿತ್ತೀರಿ. ದಾಖಲೆ ಪತ್ರಗಳ ಬಗ್ಗೆ ಎಚ್ಚರಿಕೆ ಇರಬೇಕು. ಶುಭದಿನ 20. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಶುರುವಿನಲ್ಲೇ ಆದಾಯ ಹೆಚ್ಚಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತೀರಿ. ಉದ್ಯಮಿಗಳು ಹೆಚ್ಚು ಚಟುವಟಿಕೆಯಿಂದ ಕೆಲಸ ಮಾಡುತ್ತೀರಿ. ವರ್ಚಸ್ಸು, ಸ್ಥಾನಮಾನ ಕೂಡ ಇದೇ ಅವಧಿಯಲ್ಲಿ ಹೆಚ್ಚಾಗಲಿದೆ. ಪ್ರೀತಿಪಾತ್ರರಿಗೆ ಉಡುಗೊರೆಗಳನ್ನು ನೀಡುವ ಸಾಧ್ಯತೆ ಇದೆ. ವೈಯಕ್ತಿಕ ಜೀವನದಲ್ಲಿ ಸಣ್ಣ ಪುಟ್ಟ ವಿಷಯಗಳಿಗು ಭಿನ್ನಾಭಿಪ್ರಾಯ ತಲೆದೋರಲಿದೆ. ಶುಭದಿನ 18. ಹನುಮಾನ್ ಚಾಲಿಸ್ ಪಠಿಸಿರಿ.





ವ್ಯವಹಾರ ಮಾಡುತ್ತಿರುವವರಿಗೆ ಅತ್ಯುತ್ತಮವಾದ ಸಮಯ ಇದು. ಆರೋಗ್ಯ ಕೂಡ ಈ ಅವಧಿಯಲ್ಲಿ ಉತ್ತಮವಾಗಿರುತ್ತದೆ. ನೀವು ಅಂದುಕೊಂಡ ಹಲವು ಕೆಲಸಗಳು ಪೂರ್ಣಗೊಳ್ಳುತ್ತವೆ. ಉದ್ಯೋಗಸ್ಥರಿಗೆ ಮಾಡುವ ಕೆಲಸದಲ್ಲಿ ಗುಣಮಟ್ಟದ ವೇಗ ಕಂಡುಕೊಳ್ಳಲು ಸಹಕಾರಿ ಆಗುತ್ತದೆ. ಸಾಮಾಜಿಕ ಸ್ಥಾನಮಾನವು ಹೆಚ್ಚಾಗಲಿದೆ. ಶುಭದಿನ 19. ಗಣಪತಿಗೆ ದೂರ್ವಾರ್ಚನೆ ಮಾಡಿರಿ.





ಶೈಕ್ಷಣಿಕ ಕ್ಷೇತ್ರದವರ ಸಾಧನೆಗೆ ಅತ್ಯುತ್ತಮವಾದ ಅವಧಿ ಇದು. ತಂತ್ರಜ್ಞಾನ, ಸಾಹಿತ್ಯ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಲವು ಅವಕಾಶಗಳು ಬರಲಿವೆ. ಜತೆಗೆ ಬಡ್ತಿ ಸಿಗುವ ಸಾಧ್ಯತೆಯೂ ಇದೆ. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡದೇ ಕಡ್ಡಾಯವಾಗಿ ವೈದ್ಯರಿಂದ ಚಿಕಿತ್ಸೆ ಪಡೆದುಕೊಳ್ಳಿ. ಸ್ವಯಂ ವೈದ್ಯ ಯಾವ ಕಾರಣಕ್ಕೂ ಬೇಡ. ಶುಭದಿನ 20. ಶಿವಕವಚ ಪಠಣ ಮಾಡಿರಿ.




ವಾರದ ಶುರುವಿನಿಂದಲೇ ಕೆಲಸಗಳನ್ನು ಪೂರೈಸಲು ಬಹಳ ಶ್ರಮ ಹಾಕುತ್ತೀರಿ. ಹಣ ಹೂಡಿಕೆ ವ್ಯವಹಾರದಲ್ಲಿ ನಿಮ್ಮ ಸ್ಥಾನಮಾನಕ್ಕೆ ಧಕ್ಕೆ ಆಗುವ ಸಾಧ್ಯತೆ ಇದೆ. ಯಾರನ್ನೂ ಸುಮ್ಮನೆ ನಂಬುವುದು ಒಳ್ಳೆಯದಲ್ಲ. ವಂಚಕರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಕೈಕೊಡುವ ಸಾಧ್ಯತೆ ಇದೆ. ನಿಮ್ಮ ವರ್ಚಸ್ಸು ಹೆಚ್ಚಾಗುತ್ತಾ ಸಾಗುತ್ತದೆ. ಶುಭದಿನ 21. ಲಿಂಗಾಷ್ಟಕ ಪಠಿಸಿರಿ.





ವಾರದ ಆರಂಭದಿಂದಲೇ ವ್ಯಾಪಾರದಲ್ಲಿ ಇರುವ ಕನಸನ್ನು ಈಡೇರಿಸಿಕೊಳ್ಳಲು ಶ್ರಮ ಹಾಕುತ್ತೀರಿ. ಭೂಮಿ ಖರೀದಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಹಲವು ಅವಕಾಶಗಳು ನಿಮಗೆ ದೊರೆಯುತ್ತವೆ. ಧಾರ್ಮಿಕ ಕೆಲಸ ಕಾರ್ಯಗಳಲ್ಲಿ ಹಿನ್ನಡೆ ಅನುಭವಿಸಬೇಕಾಗುತ್ತದೆ. ನಿಮ್ಮ ವರ್ಚಸ್ಸು ಹಾಳು ಮಾಡಲು ವಿರೋಧಿ ಪಾಳಯದವರು ಬಹಳ ಪ್ರಯತ್ನ ಪಡುತ್ತಾರೆ. ಶುಭದಿನ 16. ಚಂಡಿ ಪಾರಾಯಣ ಮಾಡಿರಿ.





ಕೌಟುಂಬಿಕ ವಿಚಾರದಲ್ಲಿ ವಾರದ ಶುರುವಿನಲ್ಲಿ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಹಣಕಾಸಿಗೆ ಏನೂ ಕೊರತೆ ಇರುವುದಿಲ್ಲ. ಉದ್ಯೋಗ ಹಾಗೂ ಆರೋಗ್ಯದಲ್ಲಿ ಆಲಸ್ಯ ನಿಮ್ಮನ್ನು ಕಾಡಬಹುದು. ನಿಮ್ಮ ದೈನಂದಿನ ವ್ಯವಹಾರಗಳಲ್ಲಿ ಏರಿಳಿತಗಳಾಗುತ್ತವೆ. ವಾರದ ಮಧ್ಯದಲ್ಲಿ ಮನೆಗೆ ಸಂಬಂಧಿಸಿದ ವಿಷಯಗಳು ಪ್ರಾಮುಖ್ಯ ಪಡೆಯುತ್ತವೆ. ಶುಭದಿನ 16. ಸೌಂದರ್ಯ ಲಹರಿ ಪಠಿಸಿರಿ.





ಶೈಕ್ಷಣಿಕ ರಂಗದಲ್ಲಿ ಕಾರ್ಯ ನಿರ್ವಹಿಸುವವರಿಗೆ ವಾರದ ಆರಂಭದಲ್ಲಿ ಅದ್ಭುತವಾದ ಯಶಸ್ಸು ದೊರೆಯುವ ಅವಕಾಶಗಳಿವೆ. ಕ್ರೀಡೆ, ಸಿನಿಮಾ ಸಂಗೀತ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಗೌರವಯುತವಾದ ಸ್ಥಾನಮಾನ ದೊರೆಯಲಿದೆ. ಹಲವು ಘಟನೆಗಳು ನೀವು ಅಂದುಕೊಂಡ ದಿಕ್ಕಿನ ಕಡೆಗೆ ಸಾಗುವುದರಿಂದ ಬಹಳ ಸಂತೋಷಗೊಳ್ಳುವಿರಿ. ಶುಭದಿನ 20. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.





ಉದ್ಯೋಗಸ್ಥರಿಗೆ ತಮ್ಮ ಸ್ಥಾನ ಉಳಿಸಿಕೊಳ್ಳುವುದು ಮುಖ್ಯವಾಗುತ್ತದೆ. ಕೌಟುಂಬಿಕ ಜೀವನದಲ್ಲಿ ನಿಮ್ಮ ಜವಾಬ್ದಾರಿಗಳು ಹೆಚ್ಚಾಗಲಿವೆ. ಸಂತಾನ ನಿರೀಕ್ಷೆಯಲ್ಲಿ ಇರುವ ದಂಪತಿಗೆ ಶುಭ ಸುದ್ದಿ. ವಾರದ ಮಧ್ಯ ಭಾಗದಲ್ಲಿ ನಿಮಗೆ ಅನುಕೂಲಕರವಾದ ಕೆಲ ಬೆಳವಣಿಗೆಗಳು ಆಗಲಿವೆ. ಧಾರ್ಮಿಕ ಕ್ಷೇತ್ರಗಳಿಗೆ ಭೇಟಿ ನೀಡುವ ಸಾಧ್ಯತೆಗಳಿವೆ. ಶುಭದಿನ 21. ಕಾಲಭೈರವನ ಸೇವೆ ಮಾಡಿರಿ.




ನಿಮ್ಮ ಜ್ಞಾನ ಹೆಚ್ಚಿಸಿಕೊಳ್ಳಲು ವಾರದ ಆರಂಭದಲ್ಲಿ ಉತ್ತಮವಾದ ಅವಕಾಶ ದೊರೆಯಲಿದೆ. ನಿಮ್ಮ ಶ್ರಮಕ್ಕೆ ಉತ್ತಮ ಪ್ರತಿಫಲ ದೊರೆಯುತ್ತದೆ. ಮನೆ ಹಾಗೂ ಕುಟುಂಬದಲ್ಲಿ ಸಕಾರಾತ್ಮಕವಾದ ವಾತಾವರಣ ಸೃಷ್ಟಿಸುವಲ್ಲಿ ಯಶಸ್ವಿಯಾಗುತ್ತೀರಿ. ನಿಮ್ಮ ಶ್ರಮದ ಮೂಲಕವೇ ಆದಾಯ ಹೆಚ್ಚಳಕ್ಕೆ ಅವಕಾಶ ದೊರೆಯುತ್ತದೆ. ಶುಭದಿನ 18. ವಿಷ್ಣು ಸಹಸ್ರನಾಮ ಮಾಡಿ.




ವಾರದ ಶುರುವಿನಲ್ಲಿ ದೂರ ಪ್ರಯಾಣ ಮಾಡಬೇಕಾಗುತ್ತದೆ. ಕೆಲಸ ಮಾಡುವ ನಿಮ್ಮ ಸಾಮರ್ಥ್ಯ ನಿರಂತರವಾಗಿ ಹೆಚ್ಚಾಗುತ್ತಾ ಸಾಗುತ್ತದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅಷ್ಟೇನೂ ಉತ್ತಮವಾಗಿ ಇರುವುದಿಲ್ಲ. ಇದು ನಿಮ್ಮ ಚಿಂತೆಗೆ ಕಾರಣವಾಗಲಿದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕೆಲಸ ಕಾರ್ಯಗಳನ್ನು ಮಾಡಲಿದ್ದೀರಿ. ಶುಭದಿನ 19. ಗಣೇಶಪಂಚರತ್ನ ಸ್ತೋತ್ರ ಪಠಿಸಿರಿ.




ವಾರದ ಆರಂಭದಲ್ಲಿ ವ್ಯವಹಾರ ಉದ್ಯಮದ ವಿಸ್ತರಣೆ ಬಗ್ಗೆ ಆಲೋಚನೆ ಮಾಡುತ್ತೀರಿ. ನೀವು ಕಾರ್ಯ ನಿರ್ವಹಿಸುವ ಸಂಸ್ಥೆಯ ದೀರ್ಘಾವಧಿ ಜವಾಬ್ದಾರಿಯೊಂದನ್ನು ನೀವೇ ಪೂರ್ಣಗೊಳಿಸಲು ಒಪ್ಪಿಕೊಳ್ಳುತ್ತೀರಿ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಆರೋಗ್ಯ ಕೂಡ ಉತ್ತಮವಾಗಿ ಇರುತ್ತದೆ. ರಾಜಕೀಯವಾಗಿ ಪ್ರಗತಿಗೆ ಅವಕಾಶ ದೊರೆಯಲಿದೆ. ಶುಭದಿನ 17. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.